## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 618 (700) |
| ಮಾನ್ಯ ಸದಸ್ಯರ ಹೆಸರು | ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11-12-2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ನೇರ ನೇಮಕಾತಿ ಅಧಿಸೂಚನೆ ಸಂಖ್ಯೆ: HFW 709 HSM 2017ಗೆ ಸಂಬಂಧಿಸಿದಂತೆ ಎಷ್ಟು ವೃಂದದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಯಾವ ಯಾವ ದಿನಾಂಕದಲ್ಲಿ ಸಹಮತಿ / ಅನುಮೋದನೆ ನೀಡಲಾಗಿದೆ; (ಸಂಪೂರ್ಣ ಹುದ್ದೆವಾರು ವಿವರ ನೀಡುವುದು) | ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ 2012, ದಿನಾಂಕ:06.011.2023ರ 10 (2)ರಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.<br>"(2) ಈ ಆದೇಶಗಳ ಅಡಿಯಲ್ಲಿ ಮಾಡಲಾದ ನೇಮಕಾತಿ ಮತ್ತು ಬಡ್ತಿಗಳಿಗಾಗಿ ಆರ್ಥಿಕ ಇಲಾಖೆಯ ಸಹಮತ ಇದೆಯೆಂದು ಪೂರ್ವಭಾವನೆ ಮಾಡತಕ್ಕದ್ದು."<br>ಇದರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: HFW 709 HSM 2017, ದಿನಾಂಕ:17.05.2022ರಲ್ಲಿ ಕಲ್ಯಾಣ ಕರ್ನಾಟಕ ವೃಂದದ 320 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿ ಅನುಮೋದನೆಯನ್ನು ನೀಡಲಾಗಿದ್ದು, ಆಯುಕ್ತಾಲಯದ ವಿಶೇಷ ನೇಮಕಾತಿ ಸಮಿತಿಯಿಂದ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. |
| ಆ. | ಸದರಿ ಅಧಿಸೂಚನೆಗೆ ಯಾವ ಯಾವ ನ್ಯಾಯಾಲಯಗಳು ನೇಮಕಾತಿ ಕುರಿತಂತೆ ಯಾವ ವೃಂದದ ಹುದ್ದೆಗಳಿಗೆ ಯಾವ ದಿನಾಂಕದಲ್ಲಿ ಯಾವ ಯಾವ ಆದೇಶಗಳನ್ನು ನೀಡಲಾಗಿದೆ. (ಸಂಪೂರ್ಣ ಪ್ರಕರಣವಾರು, ಹುದ್ದೆವಾರು ವಿವರ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿ ಇದ್ದ ವಿವಿಧ 13 ವೃಂದಗಳಿಗೆ ಆಯುಕ್ತಾಲಯದ ವಿಶೇಷ ನೇಮಕಾತಿ ಸಮಿತಿಯ ಅಧಿಸೂಚನೆ ಸಂಖ್ಯೆ: ಎಸ್‌ಆರ್‌ಸಿ/ಕೆ.ಕೆ./14/2022-23, ದಿನಾಂಕ:28.09.2022ರಲ್ಲಿ ಎನ್‌ಐಸಿ ಸಹಯೋಗದೊಂದಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ 13 ವೃಂದಗಳಲ್ಲಿ ಈ ಕೆಳಕಂಡ ವೃಂದಗಳಿಗೆ ಸಂಬಂಧಿಸಿದಂತೆ ಮಾತ್ರ ಬಾದಿತರು ನ್ಯಾಯಾಲಯದಲ್ಲಿ ದಾವೆ ಹೂಡಿರುತ್ತಾರೆ.<br><br>ಮೈಕ್ರೋಬಯಾಲಜಿಸ್ಟ್:<br>ಸದರಿ ಹುದ್ದೆಗೆ ನಿಗಧಿಪಡಿಸಲಾಗಿದ್ದ ವಿದ್ಯಾರ್ಹತೆಯನ್ನು ಪ್ರಶ್ನಿಸಿ ಘನ ಉಚ್ಛ ನ್ಯಾಯಾಲಯದಲ್ಲಿ ಶ್ರೀ ಕೆಲ್ವಿನ್ ದಿವಾಕರ್ ಇವರು ಪ್ರಕರಣ ಸಂಖ್ಯೆ: 17359/2022ರಲ್ಲಿ ದಾವೆ ಹೂಡಿದ್ದು, ಪ್ರಸ್ತುತ ಘನ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುತ್ತದೆ. |

Scanned with OKEN Scanner

| | | |
|---|---|---|
| | | ಸಹಾಯಕ ಎಂಟಮಾಲಾಜಿಸ್ಟ್:<br>ಸದರಿ ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಪ್ರಕರಣ ಸಂಖ್ಯೆ:4503/2022ರಲ್ಲಿ ಶ್ರೀಮತಿ ನಂದಿನಿ ಇವರು ಅರ್ಜಿಯನ್ನು ಸಲ್ಲಿಸಿದ್ದು, ಈ ಸಂಬಂಧ ಮಾನ್ಯ ನ್ಯಾಯ ಮಂಡಳಿಯು ದಿನಾಂಕ: 03.07.2023 ರಂದು ಆದೇಶವನ್ನು ಹೊರಡಿಸಿರುತ್ತದೆ.<br><br>ಫಾರ್ಮಸಿ ಅಧಿಕಾರಿ:<br>ಸದರಿ ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಬಗ್ಗೆ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಕಲಬುರಗಿ ಪೀಠ ಇಲ್ಲಿ ಶ್ರೀ ಮಹಾನಂದ ಹಾಗೂ ಇತರರು ವಿರುದ್ಧ ರಾಜ್ಯ ಸರ್ಕಾರ ಇವರು ಪ್ರಕರಣ ಸಂಖ್ಯೆ:4573-4577/2022ರಲ್ಲಿ ದಾಖಲಿಸಿದ್ದು, ಪ್ರಕರಣದ ವಿಚಾರಣೆಯನ್ನು ನಡೆಸಿ ದಿನಾಂಕ:15.03.2023ರ ಸದರಿ ಪ್ರಕರಣವನ್ನು ವಜಾಗೊಳಿಸಿ ಆದೇಶಿಸಿದೆ. |
| ಇ. | ಸದರಿ ನ್ಯಾಯಾಲಯಗಳ ತೀರ್ಪು ಪಾಲಿಸುವಲ್ಲಿ ಇಲಾಖಾ ನೇಮಕಾತಿ ಸಮಿತಿಯು ಅನಗತ್ಯ ವಿಳಂಬ ಮಾಡುತ್ತಿರುವುದರಿಂದ ಸಾವಿರಾರು ಅರ್ಹ ಅಭ್ಯರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಪ್ರಸ್ತುತ ಅಧಿಸೂಚಿಸಿರುವ 13 ವೃಂದದ ಹುದ್ದೆಗಳಲ್ಲಿ ಸಹಾಯಕ ಎಂಟಮಾಲಜಿಸ್ಟ್ ಹಾಗೂ ಫಾರ್ಮಸಿ ಅಧಿಕಾರಿ ಹುದ್ದೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಅಂತಿಮ ಆದೇಶವಾಗಿದ್ದು, ಸಹಾಯಕ ಎಂಟಮಾಲಜಿಸ್ಟ್ ಹುದ್ದೆಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಮಂಡಳಿಯು ನೀಡಿರುವ ಆದೇಶ ಬಗ್ಗೆ ಪರಿಶೀಲಿಸಲಾಗುತ್ತಿದೆ.<br><br>ಫಾರ್ಮಸಿ ಅಧಿಕಾರಿ ಹುದ್ದೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿನ ಪ್ರಕರಣವನ್ನು ವಜಾಗೊಳಿಸಿ ಆದೇಶಿಸಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ಚಾಲ್ತಿಗೊಳಿಸಲಾಗಿದೆ. |
| ಈ. | ಈ ನ್ಯಾಯಾಲಯಗಳ ತೀರ್ಪುಗಳನ್ನು ಅನುಷ್ಠಾನಗೊಳಿಸಿ ನೇಮಕಾತಿ ಪ್ರಕ್ರಿಯೆಯನ್ನು ಕಾಲಬದ್ಧ ಸಮಯದಲ್ಲಿ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವೃಂದವಾರು ವಿವರ ನೀಡುವುದು) | ಮುಂದುವರೆದು, ಘನ ನ್ಯಾಯಾಲದ ತೀರ್ಪನ್ನು ಆಧಾರಿಸಿ ಮೈಕ್ರೋಬಯಾಲಜಿಸ್ಟ್ ಹುದ್ದೆಯ ಮುಂದಿನ ನೇಮಕಾತಿ ಪ್ರಕ್ರಿಯೆಯನ್ನು ನಿಯಮಾನುಸಾರ ಚಾಲ್ತಿ ಗೊಳಿಸಲಾಗುವುದು. |

ಸಂಖ್ಯೆ: ಆಕುಕ/618/ಚುರ/2023

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

Scanned with OKEN Scanner